# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಹೆಚ್. ಎಸ್. ಗೋಪಿನಾಥ್ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 510 (706) |
| ಉತ್ತರಿಸಬೇಕಾದ ಸಚಿವರು | : | ಕೃಷಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 13-12-2024 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; | ಕರ್ನಾಟಕ ರಾಜ್ಯದಲ್ಲಿ ಈ ಕೆಳಕಂಡ ನಾಲ್ಕು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ;<br>1) ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಜಿಕೆವಿಕೆ, ಬೆಂಗಳೂರು<br>2) ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಧಾರವಾಡ<br>3) ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು<br>**4)** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಇರುವಕ್ಕಿ, ಶಿವಮೊಗ್ಗ. |
| (ಆ) | ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರ ಹಾಗೂ ಬೋಧಕೇತರರ ಸಂಖ್ಯೆ ಎಷ್ಟು ಮತ್ತು ಅವು ಯಾವುವು; (ಭಾಷಾವಾರು, ಪ್ರತಿಯೊಂದು ಕೃಷಿ ವಿಶ್ವವಿದ್ಯಾಲಯವಾರು ಮಾಹಿತಿ ಒದಗಿಸುವುದು) | ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಂಖ್ಯೆ ವಿವರ ಈ ಕೆಳಕಂಡಂತಿದೆ; (see table below)<br>ಭಾಷಾವಾರು ವಿವರವನ್ನು **ಅನುಬಂಧ-1ರಲ್ಲಿ** ಒದಗಿಸಿದೆ. |

| ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ | ಬೋಧಕ | ಬೋಧಕೇತರ |
|---|---|---|
| ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು | 339 | 504 |
| ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಧಾರವಾಡ | 308 | 411 |
| ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು | 339 | 504 |
| ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ. | 231 | 129 |

....2

| | | |
|---|---|---|
| (ಇ) | ಸದರಿ ವಿಶ್ವವಿದ್ಯಾಲಯಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗಿದೆಯೇ? (ವಿಶ್ವವಿದ್ಯಾಲಯವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು) | ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾದ, ಭರ್ತಿಯಾದ ಹಾಗೂ ಖಾಲಿಯಿರುವ ಹುದ್ದೆಗಳ ವಿವರವನ್ನು **ಅನುಬಂಧ-2ರಲ್ಲಿ** ಒದಗಿಸಿದೆ.<br><br>ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಕ್ರಮವಹಿಸಲಾಗಿದ್ದು, ಅದರಂತೆ, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು ನಲ್ಲಿ 55 ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರವು ಅನುಮತಿ ನೀಡಿದ್ದು, ವಿಶ್ವವಿದ್ಯಾಲಯವು ದಿನಾಂಕ: 24-02-2024ರಂದು ಅಧಿಸೂಚನೆಯನ್ನು ಹೊರಡಿಸಿದ್ದು, ನೇಮಕಾತಿ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ.<br><br>ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ದಲ್ಲಿನ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |

ಇ-ಸಂಖ್ಯೆ: AGRI/71/AUM/2024

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು

| | | |
|---|---|---|
| | | ಪರಿಗಣಿಸಿ ಯಂತ್ರೋಪಕರಣಗಳನ್ನು ಸರಬರಾಜು ಮಾಡುವ ಸಂಸ್ಥೆಗಳನ್ನು ಕೃಷಿ ಇಲಾಖೆಯ ವತಿಯಿಂದ ಎಂಪ್ಯಾನಲ್ ಮಾಡಲಾಗಿರುತ್ತದೆ. ಸದರಿ ಎಂಪ್ಯಾನಲ್/ದರ ಕರಾರು ಸಂಸ್ಥೆಗಳ ಎಂಪ್ಯಾನಲ್‌ಗೊಂಡಿರುವ ಯಂತ್ರೋಪಕರಣಗಳಿಗೆ ಮಾತ್ರ ಸಹಾಯಧನ ನೀಡಲಾಗುವುದು. ಕೃಷಿ ಯಂತ್ರೋಪಕರಣಗಳಿಗೆ ಸಂಬಂಧಿಸಿದಂತೆ ಪ್ರತಿ ರೈತ ಫಲಾನುಭವಿಗಳಿಗೆ (Individual farmers) (ಟ್ರಾಕ್ಟರ್ ಹೊರತುಪಡಿಸಿ) ಸಾಮಾನ್ಯ ರೈತರಿಗೆ ಶೇ.50 ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಟ ಮಿತಿ ರೂ.1.00 ಲಕ್ಷದವರೆಗೆ ನೀಡಲಾಗುತ್ತಿದೆ.<br>ಕೃಷಿ ಸಂಸ್ಕರಣಾ ಘಟಕಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಹಾಗೂ ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ. ಟಾರ್ಪಾಲಿನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ. ರೈತರು ಒಂದಕ್ಕಿಂತ ಹೆಚ್ಚು ವಿವಿಧ ಉಪಕರಣಗಳಿಗೆ (ಪುನರಾವರ್ತನೆಯಾಗದಂತೆ) ಗರಿಷ್ಠ ರೂ.1.00 ಲಕ್ಷದವರೆಗೆ ಸಹಾಯಧನವನ್ನು ಪಡೆಯಬಹುದಾಗಿರುತ್ತದೆ. 45 ಪಿ.ಟಿ.ಒ. ಹೆಚ್.ಪಿ ವರೆಗಿನ ಟ್ರ್ಯಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ. |
| 3 | ಸೂಕ್ಷ್ಮ ನೀರಾವರಿ | ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.00 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಸಹಾಯಧನ, ಹನಿ ನೀರಾವರಿ ಘಟಕಗಳ ಅಳವಡಿಕೆಗೆ ಸಾಮಾನ್ಯ ವರ್ಗದ ದೊಡ್ಡ ರೈತರನ್ನು ಹೊರತುಪಡಿಸಿ ಇತರೆ ಎಲ್ಲಾ ವರ್ಗದ ರೈತರಿಗೆ 2.00 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಸಹಾಯಧನ, ಹನಿ ನೀರಾವರಿ ಘಟಕಗಳ ಅಳವಡಿಕೆಗೆ ಸಾಮಾನ್ಯ ವರ್ಗದ ದೊಡ್ಡ ರೈತರಿಗೆ 2.00 ಹೆಕ್ಟೇರ್ ಪ್ರದೇಶದವರೆಗೆ ಶೇ.45 ರಷ್ಟು ಸಹಾಯಧನ ಮತ್ತು 2.00 ಹೆಕ್ಟೇರ್ ಕ್ಕಿಂತ ಮೇಲ್ಪಟ್ಟು 5.00 ಹೆಕ್ಟೇರ್ ಪ್ರದೇಶದವರೆಗೆ ಎಲ್ಲಾ ವರ್ಗದ ರೈತರಿಗೆ ಶೇ.45ರಷ್ಟು ಸಹಾಯಧನ ಒದಗಿಸಲಾಗುತ್ತಿದೆ. ಇದಕ್ಕಾಗಿ Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ನೀರಾವರಿ ಸೌಲಭ್ಯ ಹೊಂದಿರುವ ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. (ಪಹಣಿ) ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಅಥವಾ ಕೆ-ಕಿಸಾನ್‌ನಲ್ಲಿ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಪ್ ಲೋಡ್ ಮಾಡಬೇಕು. ರೈತರು ಸಲ್ಲಿಸುವ ಅರ್ಜಿಯ ಜ್ಯೇಷ್ಠತೆ ಹಾಗೂ ಅನುದಾನ ಲಭ್ಯತೆಯ |

## ವಿಧಾನ ಪರಿಷತ್ತಿನ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ:621 ಕ್ಕೆ ಅನುಬಂಧ

## ಕೃಷಿ ಹಾಗೂ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಫಲಾನುಭವಿ ಆಧಾರಿತ ಕಾರ್ಯಕ್ರಮಗಳು ಹಾಗೂ ಅವುಗಳ ಮಾನದಂಡಗಳ ವಿವರಗಳು

| ಕ್ರ. ಸಂ | ಯೋಜನೆ/ಕಾರ್ಯಕ್ರಮ | ಅನುಷ್ಠಾನಗೊಳಿಸಲು ಆಯ್ಕೆ ವಿಧಾನ / ಮಾನದಂಡ |
|---|---|---|
| 1 | ಬಿತ್ತನೆ ಬೀಜಗಳ ಪೂರೈಕೆ | ಕೃಷಿ ಇಲಾಖೆಯ "ಕೃಷಿ ಪರಿಕರಗಳು ಮತ್ತು ಗುಣ ನಿಯಂತ್ರಣ ಯೋಜನೆಯ "ಬೀಜಗಳ ಪೂರೈಕೆ" ಕಾರ್ಯಕ್ರಮದಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ (ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ) ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50 ರವರೆಗೆ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರವರೆಗೆ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ. ಬಿತ್ತನೆ ಬೀಜ ವಿತರಣೆಯಲ್ಲಿ ರೈತರ ಪಹಣಿಯಲ್ಲಿನ ವಿವರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುತ್ತದೆ. ಪರಿಶಿಷ್ಟ ವರ್ಗ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ರೈತರು ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗುತ್ತದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು. |
| 2 | ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ | FRUITS (Farmers Registration and Unified Beneficiary Information System) Portal ತಂತ್ರಾಂಶದಲ್ಲಿ ನೊಂದಾಯಿತರಾದ ರೈತರು ಮಾತ್ರ ತಾವು ಇಚ್ಛಿಸುವ ಯಂತ್ರೋಪರಕರಣಗಳಿಗೆ ಕೆ-ಕಿಸಾನ್ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.<br>ರೈತರು ತಾವು ಇಚ್ಛಿಸುವ ಯಂತ್ರೋಪಕರಣಗಳಿಗೆ ಕೆ-ಕಿಸಾನ್ ಪೋರ್ಟಲ್‌ನ Citizen Centric login (kkisan.karnataka.gov.in) ಅಥವಾ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ರೈತರು ಸಲ್ಲಿಸುವ ಅರ್ಜಿಗಳ ಜೇಷ್ಠತೆ ಆಧಾರದ ಮೇಲೆ, ರೈತರ ವರ್ಗದ ಆಧಾರದ ಮೇಲೆ ಮತ್ತು ಅನುದಾನ ಲಭ್ಯತೆ ಆಧಾರದ ಮೇಲೆ ಸಹಾಯಧನ ಯೋಜನೆಗಳಡಿ ರೈತರಿಗೆ ಯಂತ್ರೋಪಕರಣಗಳನ್ನು ವಿತರಿಸಲಾಗುವುದು. ರೈತರು ಯಾವುದಾದರೂ ಉಪಕರಣವನ್ನು ರಿಯಾಯಿತಿ ದರದಲ್ಲಿ ಕೃಷಿ ಇಲಾಖೆ ಮತ್ತು ಕೃಷಿ ಸಂಬಂಧಿತ ಇಲಾಖೆಗಳ ಮೂಲಕ ಪಡೆದಿದ್ದಲ್ಲಿ, ಅದೇ ಉಪಕರಣವನ್ನು ಮುಂದಿನ ಏಳು ಆರ್ಥಿಕ ವರ್ಷಗಳಲ್ಲಿ ರಿಯಾಯಿತಿ ದರಗಳಲ್ಲಿ ಪಡೆಯಲು ಅರ್ಹರಿರುವುದಿಲ್ಲ. ಟಾರ್ಪಲೀನ್ ಗಳನ್ನು ಪ್ರತಿ ಮೂರು ವರ್ಷಕ್ಕೊಮ್ಮೆ ಮಾತ್ರ ಪಡೆಯಲು ಅವಕಾಶವಿರುತ್ತದೆ. ಕೇಂದ್ರ ಸರ್ಕಾರವು ನಿಗದಿ ಪಡಿಸಿರುವ ತಾಂತ್ರಿಕ ಮಾನದಂಡಗಳನ್ನು |

| | | |
|---|---|---|
| | | ಯೋಜನೆಯಡಿ ಪಾಲ್ಗೊಳ್ಳಲು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲಾತಿಗಳಾದ ಪಹಣಿ, ಬ್ಯಾಂಕ್ ಖಾತೆ ಪುಸ್ತಕ ನೀಡಿ ವಿಮಾ ಕಂತನ್ನು ನೋಂದಣಿ ಅಂತಿಮ ದಿನಾಂಕದೊಳಗಾಗಿ ಹತ್ತಿರದ ಬ್ಯಾಂಕ್ ಶಾಖೆ ಅಥವಾ ಸಾಮಾನ್ಯ ಸೇವಾ ಕೇಂದ್ರ ಅಥವಾ ಗ್ರಾಮ-ಒನ್ ಕೇಂದ್ರವನ್ನು ಸಂಪರ್ಕಿಸಿ ಪ್ರೀಮಿಯಂ ಮೊತ್ತವನ್ನು ಪಾವತಿಸಿ ಬೆಳೆವಿಮೆಯಡಿ ನೊಂದಾಯಿಸಿಕೊಳ್ಳಬಹುದು. ನೋಂದಣಿ ಸಮಯದಲ್ಲಿ ರೈತರು ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಜೋಡಣೆ ಮಾಡಿಕೊಂಡಲ್ಲಿ ಶೀಘ್ರವಾಗಿ ಪರಿಹಾರ ಮೊತ್ತ ಇತ್ಯರ್ಥ ಸಾಧ್ಯವಾಗುತ್ತದೆ. |
| 6 | ಕೃಷಿ ಭಾಗ್ಯ | 2024-25ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ರಾಜ್ಯಾದ್ಯಂತ (ಎಲ್ಲ ಜಿಲ್ಲೆ/ತಾಲ್ಲೂಕುಗಳು) ವಿಸ್ತರಿಸಲಾಗಿದ್ದು, ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ರಾಜ್ಯದ ಮಳೆಯಾಶ್ರಿತ ಪ್ರದೇಶಗಳಲ್ಲಿ ಹಾಗೂ ಗಣಿಗಾರಿಕೆಯಿಂದ ಭಾದಿತ ಪ್ರದೇಶಗಳಲ್ಲಿ ಸುಸ್ಥಿರ ಕೃಷಿಯನ್ನು ಉತ್ತೇಜಿಸಿ ಬೆಳೆ ಉತ್ಪಾದಕತೆ ಮತ್ತು ರೈತರ ಜೀವನ ಮಟ್ಟವನ್ನು ಸುಧಾರಿಸುವ ಮೂಲಕ ಬರ ಉಪಶಮನದ ಗುರಿ ಹೊಂದಿರುತ್ತದೆ. ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಸುಸ್ಥಿರ ಕೃಷಿಯನ್ನಾಗಿ ರೂಪಾಂತರ ಗೊಳಿಸುವುದು, ಸಮರ್ಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ ಪದ್ಧತಿಯಿಂದ ಕೃಷಿ ಉತ್ಪಾದಕತೆಯನ್ನು ಉತ್ತಮ ಪಡಿಸುವುದು ಮತ್ತು ಆದಾಯವನ್ನು ಹೆಚ್ಚಿಸುವುದು. ಮಳೆ ನೀರನ್ನು ವ್ಯರ್ಥ ಮಾಡದೆ ಆಯ್ದ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು ಜಲ ಸಂಗ್ರಹಿಸಿ, ಬೆಳೆಗಳ ಸಂದಿಗ್ಧ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದು ಈ ಯೋಜನೆಯ ಉದ್ದೇಶಗಳಾಗಿರುತ್ತದೆ.<br><br>ಅರ್ಹ ರೈತರು FRUITS ID ಹೊಂದಿದ್ದು, ಕನಿಷ್ಠ 1 ಎಕರೆ ಸಾಗುವಳಿ ಭೂಮಿ ಹೊಂದಿರಬೇಕು. K-KISAN ತಂತ್ರಾಂಶದಲ್ಲಿ ಅರ್ಜಿ ನೋಂದಣಿ ಮಾಡಿದ ನಂತರ ಅರ್ಹ ಅರ್ಜಿಯ ಜೇಷ್ಠತೆ ಹಾಗೂ ನಿಗದಿತ ಗುರಿಯನುಸಾರ ಕಾರ್ಯಕ್ರಮ ಅನುಷ್ಠಾನಗೊಳಿಸಲು ಆಯ್ಕೆ ಮಾಡಲಾಗುತ್ತದೆ. ಹಿಂದಿನ ಸಾಲುಗಳಲ್ಲಿ ಕೃಷಿ ಭಾಗ್ಯ ಅಥವಾ ಇನ್ಯಾವುದೇ ಯೋಜನೆಗಳಡಿ ಕೃಷಿ ಹೊಂಡದ ಫಲಾನುಭವಿಯಾಗಿರುವ ರೈತರು ಸದರಿ ಯೋಜನೆಗೆ ಅರ್ಹತೆ ಹೊಂದಿರುವುದಿಲ್ಲ.<br><br>ಕೃಷಿ ಭಾಗ್ಯ ಯೋಜನೆಯಡಿ ಫಲಾನುಭವಿ ರೈತರು 06 ಘಟಕಗಳಾದ ಕ್ಷೇತ್ರ ಬದು, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ (Fencing), ಹೊಂಡದಿಂದ ನೀರು ಎತ್ತಲು ಡೀಸೆಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್ ಘಟಕ ಮತ್ತು ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ(ತುಂತುರು/ಹನಿ) ನೀರಾವರಿ ಘಟಕಗಳನ್ನು ಅಳವಡಿಸಿಕೊಳ್ಳುವುದು. ಕ್ಷೇತ್ರ ಬದು, ಪಂಪ್‌ಸೆಟ್ ಮತ್ತು ಸೂಕ್ಷ್ಮ ನೀರಾವರಿ ಘಟಕಗಳನ್ನು ಆದ್ಯತೆ ಮೇರೆಗೆ ಇತರೆ ಯೋಜನೆಗಳೊಂದಿಗೆ ಒಗ್ಗೂಡಿಸುವಿಕೆಯೊಂದಿಗೆ ಅನುದಾನ ಪಡೆದು ಅನುಷ್ಠಾನಗೊಳಿಸುವುದು ಮತ್ತು ಉಳಿಕೆ ಘಟಕಗಳಿಗೆ |

| | | |
|---|---|---|
| | | ಆಧಾರದ ಮೇಲೆ ರೈತರಿಗೆ ವಿತರಿಸಿದ / ರೈತರ ಹೊಲದಲ್ಲಿ ಅನುಷ್ಠಾನ ಮಾಡಿದ ಸೂಕ್ಷ್ಮ ನೀರಾವರಿ (ಹನಿ/ತುಂತುರು ನೀರಾವರಿ) ಘಟಕಗಳಿಗೆ ಸಹಾಯಧನ ಒದಗಿಸಲಾಗುವುದು. |
| 4 | ರೈತ ಸಿರಿ | ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುತ್ತದೆ. ರೈತರು ಕಡ್ಡಾಯವಾಗಿ FID ಹೊಂದಿರಬೇಕು.<br><br>ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ ನೀಡುವ ಉದ್ದೇಶದೊಂದಿಗೆ ಸಿರಿಧಾನ್ಯಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಯಂತ್ರೋಪಕರಣಗಳಿಗೆ ಒಟ್ಟು ಯಂತ್ರೋಪಕರಣಗಳ ವೆಚ್ಚದ ಮೇಲೆ ಶೇ.50 ರಷ್ಟು ಅಥವಾ ಗರಿಷ್ಠ ರೂ.10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡುತ್ತಿದ್ದು, ರೈತರು/ರೈತ ಗುಂಪುಗಳು/ರೈತ ಉತ್ಪಾದಕಾ ಗುಂಪುಗಳು/ ನವೋದ್ಯಮಿಗಳು/ ಸಾರ್ವಜನಿಕ ಉದ್ದಿಮೆಗಳು ಪ್ರಸ್ತಾವನೆ ಸಲ್ಲಿಸಲು ಅರ್ಹರಿರುತ್ತಾರೆ. |
| 5 | ಹೊಸ ಬೆಳೆ ವಿಮಾ ಯೋಜನೆ | ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯು ಕ್ಷೇತ್ರಾಧಾರಿತ ಮತ್ತು ಇಳುವರಿ ಆಧಾರಿತ ಯೋಜನೆಯಾಗಿದ್ದು ಪ್ರಕೃತಿ ವಿಕೋಪಗಳಿಂದ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಆರ್ಥಿಕ ಬೆಂಬಲ ಒದಗಿಸುತ್ತದೆ. ಯೋಜನೆಯು ಇಳುವರಿ ಹಾಗೂ ಕ್ಷೇತ್ರ ಆಧಾರಿತ ಯೋಜನೆಯಾಗಿದ್ದು, ಬೆಳೆ ಕಟಾವು ಇಳುವರಿ ಆಧಾರದ ಮೇಲೆ ಬೆಳೆ ವಿಮೆ ಪರಿಹಾರ ಲೆಕ್ಕ ಹಾಕಲು ಸಂರಕ್ಷಣೆ ತಂತ್ರಾಂಶದಲ್ಲಿ ಕೇಂದ್ರ ಸರ್ಕಾರದಿಂದ ಅನುಮೋದಿಸಿದ ವಿನಾಯಿತಿಗಳನ್ನು ಅಳವಡಿಸಿಕೊಂಡು ಬೆಳೆ ನೋಂದಣಿಯಾದ ಪ್ರಸ್ತಾವನೆಗಳೊಂದಿಗೆ ಬೆಳೆ ಸಮೀಕ್ಷೆಯ ದತ್ತಾಂಶವನ್ನು ತಾಳೆ ಮಾಡಿ, ತಾಳೆಯಾಗುವ ಪ್ರಸ್ತಾವನೆಗಳಿಗೆ ಮಾತ್ರ ಹೋಬಳಿ/ಗ್ರಾಮ ಪಂಚಾಯತಿ ಮಟ್ಟದಲ್ಲಿ ಬೆಳೆ ಕಟಾವು ಪ್ರಯೋಗಗಳಿಂದ ಬಂದಂತಹ ವಾಸ್ತವಿಕ ಇಳುವರಿ ಮಾಹಿತಿಯು(Actual Yield) ನಿಗಧಿಪಡಿಸಲಾದ ಪ್ರಾರಂಭಿಕ ಇಳುವರಿಗಿಂತ (Threshold Yield) ಕಡಿಮೆ ಇದ್ದರೆ, ಇಳುವರಿಯ ಶೇಕಡವಾರು ಕೊರತೆಗೆ ಅನುಗುಣವಾಗಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥ ಪಡಿಸಲಾಗುತ್ತದೆ.<br>ರೈತರು ಆಹಾರ ಮತ್ತು ಎಣ್ಣೆ ಕಾಳು ಬೆಳೆಗಳಿಗೆ ಮುಂಗಾರು ಹಂಗಾಮಿನಲ್ಲಿ ಶೇ. 2.00 ರಷ್ಟು ಹಾಗೂ ಹಿಂಗಾರು ಹಂಗಾಮಿನಲ್ಲಿ ಶೇಕಡ 1.50 ರಷ್ಟು ಪ್ರೀಮಿಯಂ ಮೊತ್ತವನ್ನು, ವಾರ್ಷಿಕ ವಾಣಿಜ್ಯ ಮತ್ತು ತೋಟಗಾರಿಕಾ ಬೆಳೆಗಳಿಗೆ ಎಲ್ಲಾ ಹಂಗಾಮುಗಳಲ್ಲಿ ಶೇ. 5.00 ರಷ್ಟು ಪ್ರೀಮಿಯಂ ಮೊತ್ತವನ್ನು ಪಾವತಿಸಬೇಕಾಗಿರುತ್ತದೆ. |

| | | |
|---|---|---|
| | | ಕಡ್ಡಾಯವಾಗಿ ಕೃಷಿ ಭಾಗ್ಯ ಯೋಜನೆಯಡಿ ವೆಚ್ಚ ಭರಿಸುವುದು. ಸದರಿ ಯೋಜನೆಯಡಿ ಎಲ್ಲಾ ಘಟಕಗಳಿಗೆ (ತಂತಿ ಬೇಲಿ ಹೊರತುಪಡಿಸಿ) ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಸಹಾಯಧನವನ್ನು ಒದಗಿಸಲಾಗುತ್ತದೆ (ಷರಾ: ತಂತಿ ಬೇಲಿ ಘಟಕಕ್ಕೆ ಸಾಮಾನ್ಯ ವರ್ಗದ ರೈತರಿಗೆ ಶೇ.40 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.50 ರಂತೆ ಸಹಾಯಧನ ನೀಡಲಾಗುತ್ತಿದೆ). |
| 7 | ಹೈಟೆಕ್ ಹಾರ್ವೆಸ್ಟರ್ ಹಬ್ | ಪ್ರಚಲಿತವಿರುವ ಕೃಷಿ ಯಂತ್ರಧಾರೆ ಕೇಂದ್ರಗಳು / ಕೃಷಿ ಯಂತ್ರೋಪಕರಣ ಬ್ಯಾಂಕುಗಳು / ರೈತ ಉತ್ಪಾದಕ ಸಂಸ್ಥೆಗಳು / ಸೇವಾದಾರ ಸಂಸ್ಥೆಗಳು / ಇತರೇ ಸಂಘ ಸಂಸ್ಥೆಗಳು / ವೈಯಕ್ತಿಕ ಫಲಾನುಭವಿಗಳು ಅರ್ಜಿಯನ್ನು ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ. ಸಹಕಾರ ಸಂಘ ನಿಬಂಧನೆಯಂತೆ / ಕಂಪನಿ ಕಾಯ್ದೆಯಡಿ ನೋಂದಾಯಿತ ಸಂಘ ಸಂಸ್ಥೆಗಳು ಹಾಗೂ FID ಯನ್ನು ಹೊಂದಿರುವ ವೈಯಕ್ತಿಕ ಫಲಾನುಭವಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.<br>ಆರು ಅಥವಾ ಒಂಬತ್ತು ವರ್ಷಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಿ ತಪಾಸಣೆಯಲ್ಲಿ ಸಂಪೂರ್ಣವಾಗಿ ಲೆಕ್ಕ ಪತ್ರ ಮತ್ತು ಯಂತ್ರೋಪಕರಣಗಳನ್ನು ಹಾಜರು ಪಡಿಸಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಸಂಸ್ಥೆ ಮತ್ತು ಟ್ರಸ್ಟ್‌ಗಳು ಇತ್ತೀಚಿನ ಎರಡು ವರ್ಷಗಳ ಲೆಕ್ಕ ಪರಿಶೋಧಕರ ವರದಿ ಹೊಂದಿರಬೇಕು ಹಾಗೂ ಕೃಷಿ ಯಂತ್ರೋಪಕರಣಗಳ ಬ್ಯಾಂಕುಗಳನ್ನು ಸಮರ್ಪಕವಾಗಿ ನಿರ್ವಹಿಸಿರಬೇಕು. ಹೊಸ ಸಂಸ್ಥೆಗಳಾದಲ್ಲಿ, ಕೃಷಿ ಯಂತ್ರೋಪಕರಣಗಳ ಬಳಕೆಯಲ್ಲಿ ಕನಿಷ್ಠ ಎರಡು ವರ್ಷಗಳ ಅನುಭವವನ್ನು ಹೊಂದಿರಬೇಕು ಹಾಗೂ ಎರಡು ವರ್ಷಗಳ ಇತ್ತೀಚಿನ ಲೆಕ್ಕ ಪರಿಶೋಧಕರ ವರದಿಯನ್ನು ಹೊಂದಿರಬೇಕು. ಅರ್ಜಿಯೊಂದಿಗೆ ತಾತ್ವಿಕ ಸಾಲ ಮಂಜೂರಾತಿ ಪತ್ರವನ್ನು ಸಲ್ಲಿಸಿರಬೇಕು. ಸಹಾಯಧನವನ್ನು ಅರ್ಜಿದಾರರ ಸಾಲದ ಖಾತೆಗೆ Credit Linked Back Ended Subsidy ಮುಖಾಂತರ ಜಮೆ ಮಾಡಲಾಗುವುದು. ಪರಿಶಿಷ್ಟ ಜಾತಿ / ಪಂಗಡದ ರೈತರು FID ಯೊಂದಿಗೆ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. |
| 8 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ (RKVY-IFS) | ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆಯಾಗಿ 2400 ಸಮಗ್ರ ಕೃಷಿ ಪದ್ಧತಿ ಮಾದರಿಗಳನ್ನು ಅನುಷ್ಠಾನಗೊಳಿಸಲು ಕಾರ್ಯಕ್ರಮವನ್ನು ರೂಪಿಸಿದ್ದು ಅದರಂತೆ |

| | | |
|---|---|---|
| | | ಅನುಷ್ಠಾನ ಮಾಡಲಾಗುತ್ತಿದೆ.<br><br>ರೈತರು ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸತಕ್ಕದ್ದು ಹಾಗು ರೈತರು FRUITS Portal ನಲ್ಲಿ ಕಡ್ಡಾಯವಾಗಿ ನೋಂದಣಿ ಹೊಂದಿರಬೇಕು. ಪ್ರತಿ ಹೋಬಳಿಯಲ್ಲಿ 2-3 ಸಮಗ್ರ ಕೃಷಿ ಪದ್ಧತಿ-ತಾಕುಗಳನ್ನು ಸ್ಥಾಪಿಸುವುದು. ಪ್ರಸಕ್ತ ವರ್ಷದಲ್ಲಿ ಆದ್ಯತೆ ಮೇರೆಗೆ ಇಲ್ಲಿಯವರೆಗೆ ಅಂದರೆ 2021-22, 2022-23 ಮತ್ತು 2023-24 ನೇ ಸಾಲಿನಲ್ಲಿ ಅನುಷ್ಠಾನ ಮಾಡದಿರುವ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯಕ್ರಮ ಅನುಷ್ಠಾನ ಮಾಡುವುದು ಹಾಗೂ ತದನಂತರ ಬೇಡಿಕೆ ಇರುವ ಪಂಚಾಯಿತಿಗಳಲ್ಲಿ ಒಂದಕ್ಕಿಂತ ಹೆಚ್ಚು ಮಾದರಿಯನ್ನು ಅನುಷ್ಠಾನ ಮಾಡುವುದು. ಸಮಗ್ರ ಕೃಷಿ ಪದ್ಧತಿ ಪ್ರಾತ್ಯಕ್ಷಿಕೆಗಳನ್ನು ಕನಿಷ್ಠ 1 ಎಕರೆಯಿಂದ – ಗರಿಷ್ಠ 1 ಹೆಕ್ಟೇರ್ ಪ್ರದೇಶದಲ್ಲಿ ಏರ್ಪಡಿಸುವುದು. ಫಲಾನುಭವಿಯು ಆಸಕ್ತ ಪ್ರಗತಿ ಪರ ರೈತನಾಗಿದ್ದು ಸಮಗ್ರ ಕೃಷಿ ಪದ್ಧತಿ ಅಳವಡಿಸಲು ಶೇ. 50 ರಷ್ಟು ವಂತಿಕೆ ಭರಿಸಲು ಸಿದ್ಧನಾಗಿರಬೇಕು. ಇತರೆ ರೈತರು ಅಳವಡಿಸಲು ಸೂಕ್ತವಾಗುವಂತೆ ಮಾದರಿಯಾಗಿ ಸಮಗ್ರ ಕೃಷಿ ಪದ್ಧತಿಯ ತಾಕನ್ನು ರೂಪಿಸುವ ಮನೋಭಾವನೆ ಇರುವ ರೈತರನ್ನು ಆಯ್ಕೆ ಮಾಡುವುದು. ಸಂಪೂರ್ಣ ಘಟಕಗಳನ್ನು ಅಳವಡಿಸಲು ಕ್ರಮ ವಹಿಸುವುದು. PMKSY OI, ಕೃಷಿ ಭಾಗ್ಯ, ಕೃಷಿ ಭಾಗ್ಯ (SDMF) ಯೋಜನೆಯೊಂದಿಗೆ ಒಗ್ಗೂಡಿಸಿ ಅನುಷ್ಠಾನ ಮಾಡುವುದು. |
| 9 | ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ (PMKISAN) | ಕರ್ನಾಟಕ ರಾಜ್ಯದಲ್ಲಿ ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ದಿನಾಂಕ 01.12.2018 ರಿಂದ ಅನ್ವಯ ವಾಗುವಂತೆ ಫೆಬ್ರವರಿ 2019 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸಾಗುವಳಿ ಭೂಮಿ ಹೊಂದಿರುವ (01.02.2019 ರಳೊಳಗಾಗಿ ಸ್ವಾಧೀನದಲ್ಲಿರುವ /ಭೂದಾಖಲೆಯಲ್ಲಿ ಹೆಸರಿರುವ) ಎಲ್ಲಾ ಅರ್ಹ ರೈತ ಕುಟುಂಬಕ್ಕೆ (ಒಂದು ಕುಟುಂಬ ಎಂದರೆ ಗಂಡ, ಹೆಂಡತಿ ಮತ್ತು ಅಪ್ರಾಪ್ತ ಮಕ್ಕಳು) ಕೃಷಿ ಚಟುವಟಿಕೆಯಲ್ಲಿ ಉತ್ತಮ ಪರಿಕರಗಳನ್ನು ಬಳಸಿ ಬೆಳೆಗಳ ಆರೋಗ್ಯ ನಿರ್ವಹಣೆ ಹಾಗೂ ಹೆಚ್ಚಿನ ಇಳುವರಿ ಪಡೆದು ನಿರೀಕ್ಷಿತ ಆದಾಯಗಳಿಸಲು ನೆರವಾಗಲು ವಾರ್ಷಿಕ ರೂ.6000/-ಗಳ ಆರ್ಥಿಕ ನೆರವನ್ನು ನೀಡಲಾಗುತ್ತಿದೆ. ಸದರಿ ಅನುದಾನವನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು.<br>ಅನರ್ಹತೆ:<br>▪ ಭೂಮಿ ಹೊಂದಿರುವ ಸಂಘ ಅಥವಾ ಸಂಸ್ಥೆಗಳು.<br>▪ ಮಾಜಿ ಮತ್ತು ಹಾಲಿ ಸಾಂವಿಧಾನಿಕ ಹುದ್ದೆಗಳಲ್ಲಿ ಕುಟುಂಬ ಸದಸ್ಯರು ಇದ್ದಲ್ಲಿ, ಕುಟುಂಬ ಸದಸ್ಯರು ಮಾಜಿ ಮತ್ತು ಹಾಲಿ ಸಚಿವರು / ರಾಜ್ಯಸಚಿವರು / ರಾಜ್ಯ ವಿಧಾನಸಭೆ / ವಿಧಾನ ಪರಿಷತ್ತಿನ ಸದಸ್ಯರು / ನಗರ ಸಭೆ ಅಧ್ಯಕ್ಷರು/ ಪುರಸಭೆ ಅಧ್ಯಕ್ಷರು /ಜಿಲ್ಲಾ ಪಂಚಾಯಿತಿ ಅಧ್ಯಕ್ಷರು<br>▪ ಕುಟುಂಬ ಸದಸ್ಯರು ನಿವೃತ್ತ / ಹಾಲಿ ಸೇವೆಯಲ್ಲಿರುವ ಕೇಂದ್ರ / ರಾಜ್ಯ ಸರ್ಕಾರಗಳ / ಸಚಿವಾಲಯ ಕಛೇರಿ/ ಇಲಾಖೆ, ಕ್ಷೇತ್ರ ಕಛೇರಿಗಳು/ ಕೇಂದ್ರ / ರಾಜ್ಯ ಸರ್ಕಾರಿ |

| | | |
|---|---|---|
| | | ಸ್ವಾಮ್ಯದ ಸಂಸ್ಥೆಗಳು, ಅಂಗ ಸಂಸ್ಥೆಗಳು / ಸ್ವಾಯತ್ತ ಸಂಸ್ಥೆಗಳು ಅಧಿಕಾರಿಗಳು ಹಾಗೂ ನೌಕರರು / ಸ್ಥಳೀಯ ಸಂಸ್ಥೆಗಳ ಖಾಯಂ ನೌಕರರು (ಗ್ರೂಪ್-ಡಿ / 4ನೇ ವರ್ಗ / Multi tasking staff ಹೊರತುಪಡಿಸಿ)<br>▪ ಕುಟುಂಬ ಸದಸ್ಯರು ರೂ. 10,000/- ಅಥವಾ ಹೆಚ್ಚಿನ ಮೊತ್ತ ಪಡೆಯುತ್ತಿರುವ ವಯೋನಿವೃತ್ತ / ನಿವೃತ್ತ ಪಿಂಚಣಿದಾರರು. (ಗ್ರೂಪ್-ಡಿ / 4ನೇ ವರ್ಗ Multi tasking staff ಹೊರತುಪಡಿಸಿ)<br>▪ ಕುಟುಂಬ ಸದಸ್ಯರು ಕಳೆದ ಸಾಲಿನಲ್ಲಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಅನರ್ಹರಾಗಿರುತ್ತಾರೆ. ಆದರೆ ದಿನಾಂಕ 25.10.2023 ಹೊಸ ಮಾರ್ಗಸೂಚಿಯನ್ವಯ ಕನಿಷ್ಠ ಮೂರು ವರ್ಷಗಳು ಆದಾಯ ತೆರಿಗೆ ಪಾವತಿದಾರರಿದ್ದರೆ (ಎರಡು ವರ್ಷ ಸತತವಾಗಿ ಆದಾಯ ತೆರಿಗೆ ಪಾವತಿಮಾಡಿದರೆ) ಯೋಜನೆಗೆ ಅನರ್ಹರಾಗಿರುತ್ತಾರೆ, ವೈದ್ಯ, ಅಭಿಯಂತರ, ವಕೀಲ, ಲೆಕ್ಕಪರಿಶೋಧಕರು, ವಾಸ್ತುಶಿಲ್ಪದಂತಹ ವೃತ್ತಿಪರರು ಮತ್ತು ವೃತ್ತಿಪರ ಸಂಸ್ಥೆಯಲ್ಲಿ ನೋಂದಾಯಿತ ಸದರಿ ವೃತ್ತಿಯನ್ನು ಕೈಗೊಳ್ಳುತ್ತಿರುವವರು. |
| 10 | ಆಹಾರ ಮತ್ತು ಪೌಷ್ಠಿಕ ಭದ್ರತೆ (Food and Nutrition Security-FNS) | ಈ ಯೋಜನೆಯಡಿ ಭತ್ತ, ದ್ವಿದಳಧಾನ್ಯ, TRFA-ದ್ವಿದಳಧಾನ್ಯ, ಒರಟುಧಾನ್ಯ, ನ್ಯೂಟ್ರಿಸಿರಿಧಾನ್ಯ, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಭತ್ತ, ದ್ವಿದಳಧಾನ್ಯ, ನ್ಯೂಟ್ರಿಸಿರಿಧಾನ್ಯ ಮತ್ತು ಒರಟುಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ಕೃಷಿ ಸುಣ್ಣ, ನೀರು ಒದಗಿಸುವ ಪೈಪುಗಳು ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಿಗೆ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ನ್ಯೂಟ್ರಿಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹ ಧನ ನೀಡಲಾಗುತ್ತಿದೆ.<br><br>ಎಲ್ಲಾ ರೈತರು ಅರ್ಹರಾಗಿದ್ದು, FRUITS Portal ನಲ್ಲಿ ಕಡ್ಡಾಯವಾಗಿ ನೋಂದಣಿ ಹೊಂದಿರಬೇಕು. ಒಂದು ಹಂಗಾಮಿನಲ್ಲಿ ಪ್ರಾತ್ಯಕ್ಷಿಕೆಯಡಿ ಸಹಾಯಧನ ಪಡೆಯಲು ಎಲ್ಲಾ ವರ್ಗದ ಫಲಾನುಭವಿ ರೈತರುಗಳಿಗೆ 2 ಹೆಕ್ಟೇರ್ ಗಳವರೆಗೆ ಕ್ಷೇತ್ರ ವಿಸ್ತೀರ್ಣವನ್ನು ಮಿತಿಗೊಳಿಸಲಾಗಿರುತ್ತದೆ. ಒಂದು ಹಂಗಾಮಿನಲ್ಲಿ ಯೋಜನೆಯ ವಿವಿಧ ಘಟಕಗಳಡಿ ಸಹಾಯಧನವನ್ನು ಪಡೆಯಲು ಎಲ್ಲಾ ವರ್ಗದ ರೈತರಿಗೂ 5 ಹೆಕ್ಟೇರ್ ಗಳವರೆಗೆ ಕ್ಷೇತ್ರ ವಿಸ್ತೀರ್ಣವನ್ನು ಮಿತಿಗೊಳಿಸಲಾಗಿರುತ್ತದೆ. |
| 11 | ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds) | ಈ ಯೋಜನೆಯಡಿ ಎಣ್ಣೆಕಾಳುಗಳ ಉತ್ಪಾದನೆಯನ್ನು ಹೆಚ್ಚಿಸಲು ನೂತನ/ಸುಧಾರಿತ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಪೀಡೆನಾಶಕಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ, ಕೃಷಿ ಉಪಕರಣಗಳು ಹಾಗೂ ನೀರು |

| | | |
|---|---|---|
| | | ಒದಗಿಸುವ ಪೈಪುಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೇ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಪ್ರತಿ ಕ್ವಿಂಟಾಲ್ ಬಿತ್ತನೆ ಬೀಜೋತ್ಪಾದನೆಗೆ ರೂ.2500/-ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.<br><br>ಎಲ್ಲಾ ರೈತರು ಅರ್ಹರಾಗಿದ್ದು, FRUITS Portal ನಲ್ಲಿ ಕಡ್ಡಾಯವಾಗಿ ನೋಂದಣಿ ಹೊಂದಿರಬೇಕು. ಒಂದು ಹಂಗಾಮಿನಲ್ಲಿ ಪ್ರಾತ್ಯಕ್ಷಿಕೆಯಡಿ ಸಹಾಯಧನ ಪಡೆಯಲು ಎಲ್ಲಾ ವರ್ಗದ ಫಲಾನುಭವಿ ರೈತರುಗಳಿಗೆ 2 ಹೆಕ್ಟೇರ್ ಗಳವರೆಗೆ ಕ್ಷೇತ್ರ ವಿಸ್ತೀರ್ಣವನ್ನು ಮಿತಿಗೊಳಿಸಲಾಗಿರುತ್ತದೆ.<br>ಒಂದು ಹಂಗಾಮಿನಲ್ಲಿ ಯೋಜನೆಯ ವಿವಿಧ ಘಟಕಗಳಡಿ ಸಹಾಯಧನವನ್ನು ಪಡೆಯಲು ಎಲ್ಲಾ ವರ್ಗದ ರೈತರಿಗೂ 5 ಹೆಕ್ಟೇರ್ ಗಳವರೆಗೆ ಕ್ಷೇತ್ರ ವಿಸ್ತೀರ್ಣವನ್ನು ಮಿತಿಗೊಳಿಸಲಾಗಿರುತ್ತದೆ. |
| 12 | ಸಸ್ಯ ಸಂರಕ್ಷಣೆ | ಶೇ.50ರ ಸಹಾಯಧನದಡಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ಬೀಜೋಪಚಾರ ಆಂದೋಲನ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿಗಾಗಿ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು. |
| 13 | ಮಣ್ಣು ಆರೋಗ್ಯ ಮತ್ತು ಫಲವತ್ತತೆ ಯೋಜನೆ | ಮಣ್ಣು ಆರೋಗ್ಯ ಮತ್ತು ಫಲವತ್ತತೆ ಯೋಜನೆಯಡಿ ಮಣ್ಣಿನ ಆರೋಗ್ಯ ಮತ್ತು ಮಣ್ಣಿನ ಗುಣಾತ್ಮಕ ಅಂಶಗಳ ಮಹತ್ವವನ್ನು ಕೃಷಿಕರಿಗೆ ತಿಳಿಸುವ ಸದುದ್ದೇಶದಿಂದ ಮಣ್ಣು ಪರೀಕ್ಷೆ ಆಧಾರಿತ ಮಣ್ಣು ಆರೋಗ್ಯ ಕಾರ್ಡ್ ಗಳನ್ನು ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ರೈತರಿಗೆ ಉಚಿತವಾಗಿ ಮಣ್ಣು ಆರೋಗ್ಯ ಕಾರ್ಡ್ ಗಳನ್ನು ವಿತರಿಸಲಾಗುತ್ತಿದೆ. ಮಣ್ಣು ಆರೋಗ್ಯ ಕಾರ್ಡ್ ಅವಧಿಯು 3 ವರ್ಷಗಳಾಗಿರುತ್ತದೆ. ಮಣ್ಣು ಆರೋಗ್ಯ ಕಾರ್ಡ್ ಶಿಫಾರಸ್ಸಿನ ಆಧಾರದ ಮೇಲೆ ರಸಗೊಬ್ಬರಗಳ ಬಳಕೆ ಮಾಡುವ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.<br><br>2024-25ನೇ ಸಾಲಿನಲ್ಲಿ 2.68 ಲಕ್ಷ ಮಣ್ಣು ಮಾದರಿಗಳನ್ನು ಸಂಗ್ರಹಿಸಿ, ವಿಶ್ಲೇಷಿಸಿ, ಮಣ್ಣು ಆರೋಗ್ಯ ಕಾರ್ಡ್‌ಗಳ ವಿತರಣೆ ಮಾಡಲಾಗುತ್ತಿದೆ. ಮಣ್ಣು ಆರೋಗ್ಯ ಕಾರ್ಡ್ ಪಡೆಯಲು ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು. ಮೊಬೈಲ್ ತಂತ್ರಾಂಶದಲ್ಲಿ ರೈತರ ವಿವರ, ಬೆಳೆ ವಿವರ, ನೀರಾವರಿ ವಿವರ ಹಾಗೂ ಮಣ್ಣಿನ ವಿಧದ ವಿವರಗಳನ್ನು ಜಿಪಿಎಸ್‌ನೊಂದಿಗೆ ನೋಂದಣಿ ಮಾಡುವುದು ಕಡ್ಡಾಯವಾಗಿರುತ್ತದೆ. |
| 14 | ಸಾವಯವ ಇಂಗಾಲ ಅಭಿಯಾನ | ಈ ಕಾರ್ಯಕ್ರಮದಡಿ ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಉಪಯುಕ್ತತೆಯ ಬಗ್ಗೆ ರೈತರಿಗೆ ಅರಿವು ಮೂಡಿಸುವ ಸಲುವಾಗಿ ಸಾವಯವ ಇಂಗಾಲ ಹೆಚ್ಚಿಸುವ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲು ಫಲಾನುಭವಿ ರೈತರಿಗೆ ಪ್ರತಿ ಹೆಕ್ಟೇರ್ ಗೆ ಗರಿಷ್ಠ ರೂ. 2500/- ಗಳ |

| | | |
|---|---|---|
| | | ಸಹಾಯಧನ ನೀಡಲಾಗುತ್ತಿದೆ ಹಾಗೂ ಹಸಿರೆಲೆ ಗೊಬ್ಬರ ಬಳಕೆಯನ್ನು ಪ್ರೋತ್ಸಾಹಿಸಲು ಎಲ್ಲಾ ವರ್ಗದ ರೈತರಿಗೆ ಶೇ. 75ರ ರಿಯಾಯಿತಿ ದರದಲ್ಲಿ ಅಥವಾ ಪ್ರತಿ ಹೆಕ್ಟೇರ್ ಗೆ ರೂ. 3000/- ಮೀರದಂತೆ ಪ್ರಮುಖವಾಗಿ ಡಯಾಂಚ, ಸನ್ಹೆಂಪ್ ಹಸಿರೆಲೆ ಗೊಬ್ಬರ ಬೀಜಗಳನ್ನು ವಿತರಣೆ ಮಾಡಲಾಗುತ್ತಿದೆ. ಪ್ರತಿ ರೈತರಿಗೆ ಗರಿಷ್ಠ 2.0 ಹೆಕ್ಟೇರ್ ವರೆಗೆ ಸಹಾಯಧನ ಸೀಮಿತಗೊಳಿಸಲಾಗಿದೆ. ಈ ಯೋಜನೆಯ ಪ್ರಯೋಜನ ಪಡೆಯಲು, ರೈತರು ಗುರುತಿನ ಸಂಖ್ಯೆ (FID)ಅನ್ನು ಹೊಂದಿರತಕ್ಕದ್ದು ಮತ್ತು ರೈತರ ವಂತಿಕೆ ಪಾವತಿಸಬೇಕಾಗಿರುತ್ತದೆ. |
| 15 | ಕರ್ನಾಟಕ ರೈತ ಸಮೃದ್ಧಿ ಯೋಜ | ಕೃಷಿ ಕ್ಷೇತ್ರವನ್ನು ಸುಸ್ಥಿರ ಹಾಗೂ ಲಾಭದಾಯಕವಾಗಿಸಲು ರಾಜ್ಯದಲ್ಲಿ ಪ್ರಸ್ತುತ ಕೃಷಿ ಇಲಾಖೆಯಲ್ಲಿ ಪ್ರಸ್ತುತ ಅನುಷ್ಠಾನಗೊಳಿಸುತ್ತಿರುವ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳನ್ನು ಕೇಂದ್ರ ಬಿಂದುವಾಗಿರಿಸಿಕೊಂಡು ವಿವಿಧ ರೈತಪರ ಯೋಜನೆಗಳನ್ನು ಸಂಯೋಜಿಸುವ ಮೂಲಕ, ರೈತ ಮತ್ತು ರೈತ ಗುಂಪುಗಳಿಗೆ ಗುಣಮಟ್ಟದ ಉತ್ಪಾದನೆ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ರಫ್ತು ಮಾಡುವುದರ ಬಗ್ಗೆ ಸಾಮರ್ಥ್ಯ ಅಭಿವೃದ್ಧಿ ಹಾಗೂ ಅರಿವು ಮೂಡಿಸುವುದು. ರೈತರಿಗೆ ಮಣ್ಣು ಪರೀಕ್ಷೆಯ ಆಧಾರದ ಮೇಲೆ ಯಾವ ಬೆಳೆ ಬೆಳೆಯಬೇಕೆಂಬ ಕುರಿತು ಹಾಗೂ ಮಾರುಕಟ್ಟೆ ಬೇಡಿಕೆಯನ್ನು ಆಧರಿಸಿ ಮಾರ್ಗದರ್ಶನ ನೀಡುವುದು...ಇತ್ಯಾದಿಗಳ ಮೂಲಕ ಆಹಾರ ಉತ್ಪಾದನೆ ಹಾಗೂ ರೈತರ ಆದಾಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ, ಒಟ್ಟು ರೂ. 10.00 ಕೋಟಿ ಅನುದಾನ ಸೀಮಿತಗೊಳಿಸಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ರೈತರು ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸತಕ್ಕದ್ದು ಹಾಗು ರೈತರು Fruit ID ಹೊಂದಿರಬೇಕು.<br><br>ಸಮಗ್ರ ಕೃಷಿ ಪದ್ಧತಿ ಘಟಕದಡಿ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳಲ್ಲಿ ಸುಸ್ಥಿತಿಯಲ್ಲಿರುವ ಘಟಕಗಳಿರುವ ಯಾವುದೇ ಆಸಕ್ತರನ್ನು ಆಯ್ಕೆ ಮಾಡುವುದು. ಹಾಗೆಯೇ, 2023-24ನೇ ಸಾಲಿನ ಫಲಾನುಭವಿಗಳಿಗೆ ಆದ್ಯತೆ ನೀಡುವುದು ಹಾಗು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯಲ್ಲಿ ಫಲಾನುಭವಿ ಪಟ್ಟಿಯ ಅನುಮೋದನೆ ಪಡೆಯುವುದು.<br><br>ರೈತ ಉತ್ಪಾದಕ ಸಂಸ್ಥೆಗಳು (FPO), ಸಾವಯವ ರೈತ ಒಕ್ಕೂಟಗಳು, ಸ್ವಸಹಾಯ ಸಂಘಗಳು (SHG), ಮತ್ತು ರೈತ ಗುಂಪುಗಳಿಗೆ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮದಡಿ ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ/ ತೊಡಗಿಸಿಕೊಂಡಿರುವ ಹಾಗೂ ಈಗಾಗಲೇ ಉದ್ದಿಮೆಗಳನ್ನು ಕಾರ್ಯಾರಂಭ ಮಾಡಿರುವ ಎರಡರಿಂದ ಮೂರು ರೈತ ಉತ್ಪಾದಕ ಸಂಸ್ಥೆಗಳು / ಸ್ವಸಹಾಯ ಸಂಘಗಳು (SHG), ಸಾವಯವ ರೈತ ಒಕ್ಕೂಟಗಳು, ಮತ್ತು ರೈತ ಗುಂಪುಗಳನ್ನು ಪ್ರತಿ ಜಿಲ್ಲೆಯಲ್ಲಿ ಆಯ್ಕೆ |

| | | |
|---|---|---|
| | | ಮಾಡುವುದು<br>ರೈತರಿಗೆ ಮಾರ್ಗದರ್ಶನ ಘಟಕದಡಿ ಮಣ್ಣು ಮಾದರಿ ಸಂಗ್ರಹಣೆ/ ವಿಶ್ಲೇಷಣೆ ಹಾಗೂ ಮಣ್ಣು ಪರೀಕ್ಷೆ ಆಧಾರಿತ ಬೆಳೆ/ ಪೋಷಕಾಂಶಗಳ ಶಿಫಾರಸ್ಸು ಮತ್ತು ಹೊಸ ತಾಂತ್ರಿಕತೆ ಅಳವಡಿಕೆಗೆ ಉತ್ತೇಜನ ನೀಡಲು ರಾಜ್ಯದ ಅತಿ ಕಡಿಮೆ ಉತ್ಪಾದಕತೆ ಇರುವ 398 ಗ್ರಾಮ ಪಂಚಾಯಿತಿಗಳ ಫಲಾನುಭವಿಗಳನ್ನು ಆಯ್ಕೆ ಮಾಡುವುದು. |
| 16 | ಬೆಳೆ ವೈವಿಧ್ಯತೆ ಕಾರ್ಯಕ್ರಮ (Crop Diversification Programme-CDP) | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಬೆಳೆ ವೈವಿಧ್ಯತೆ ಕಾರ್ಯಕ್ರಮದಡಿ (Crop Diversification Programme) ತಂಬಾಕು ಬೆಳೆಗೆ ಪರ್ಯಾಯ ಬೆಳೆ ಕಾರ್ಯಕ್ರಮವನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ ಸಹಯೋಗದೊಂದಿಗೆ ಅನುಮೋದಿತ ಕ್ರಿಯಾ ಯೋಜನೆಯನ್ವಯ ಪ್ರಾತ್ಯಕ್ಷಿತೆಗಳು, ಸಮಗ್ರ ಕೃಷಿ ಪದ್ಧತಿಗಳು, ಕೃಷಿ ಹೊಂಡ ನಿರ್ಮಾಣ, ಹಸಿರೆಲೆ ಗೊಬ್ಬರ ಬೀಜ ವಿತರಣೆಗೆ ಶೇಕಡ 50ರ ರಿಯಾಯಿತಿಯಲ್ಲಿ ಸಹಾಯಧನ ನೀಡುವುದರ ಜೊತೆಗೆ ರೈತರಿಗೆ ತರಬೇತಿ ಕಾರ್ಯಕ್ರಮಗಳ ಆಯೋಜನೆ ಹಾಗೂ ತೋಟಗಾರಿಕೆ ಇಲಾಖೆಯಡಿ ಯಂತ್ರೋಪಕರಣಗಳ ಬಳಕೆ ಹಾಗೂ ಮೌಲ್ಯವರ್ಧನೆ ಕಾರ್ಯಕ್ರಮಗಳನ್ನು ಬೆಳಗಾವಿ, ಹಾಸನ ಮತ್ತು ಮೈಸೂರು ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ರೈತರನ್ನು ತಂಬಾಕು ಬೆಳೆಯ ಬದಲು ಪರ್ಯಾಯ ಬೆಳೆ ಬೆಳೆಸಲು ಪ್ರೋತ್ಸಾಹಿಸುವುದು ಹಾಗೂ ರೈತರ ಆದಾಯ ಹೆಚ್ಚಿಸಲು ಕೃಷಿ ಜೊತೆಗೆ ಇತರೆ ಆದಾಯ ನೀಡುವ ಚಟುವಟಿಕೆಗಳನ್ನು ಅಳವಡಿಸಲು ಪ್ರೇರೇಪಿಸುವ ಉದ್ದೇಶದೊಂದಿಗೆ ಕಾರ್ಯಕ್ರಮ ಅನುಷ್ಠಾನ ಗೊಳಿಸಲಾಗುತ್ತದೆ. ತಂಬಾಕು ಬೆಳೆಯುವ ಎಲ್ಲಾ ರೈತರು ಅರ್ಹರಾಗಿದ್ದು, FRUITS Portal ನಲ್ಲಿ ಕಡ್ಡಾಯವಾಗಿ ನೋಂದಣಿ ಹೊಂದಿರಬೇಕು. |
| 17 | ಮುಖ್ಯಮಂತ್ರಿಗಳ ರೈತ ವಿದ್ಯಾನಿಧಿ | ಎಸ್.ಎಸ್.ಎಲ್.ಸಿ/ 10ನೇ ತರಗತಿಯನ್ನು ಪೂರೈಸಿರುವ ಹಾಗೂ ರಾಜ್ಯದ ಯಾವುದೇ ಭಾಗದಲ್ಲಿ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಮಕ್ಕಳಿಗೆ ಹಾಗೂ ಭೂರಹಿತ ಕೃಷಿ ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಸದರಿ ಯೋಜನೆಯಡಿ 8, 9 ಮತ್ತು 10 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳು ಈ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.<br>ರೈತ ಕುಟುಂಬದ ಎಲ್ಲಾ ಮಕ್ಕಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಎಂದರೆ ರಾಜ್ಯದ ಯಾವುದೇ ಭಾಗದಲ್ಲಿ ಉಳುಮೆ ಮಾಡುವಂತಹ/ ಕೃಷಿ ಮಾಡುವಂತಹ ಜಮೀನನ್ನು ತನ್ನ ಹೆಸರಿನಲ್ಲಿ ಹೊಂದಿರುವಂತಹ ವ್ಯಕ್ತಿ (ಕೃಷಿ ಇಲಾಖೆಯ FRUITS ತಂತ್ರಾಂಶದಲ್ಲಿ ಭೂಸಹಿತ FID ಸಂಖ್ಯೆ ಹೊಂದಿರಬೇಕು). ಕೃಷಿ ಕಾರ್ಮಿಕರು ಎಂದರೆ ಕೃಷಿ ಇಲಾಖೆಯ FRUITS ತಂತ್ರಾಂಶದಲ್ಲಿ ಭೂರಹಿತ FID ಸಂಖ್ಯೆ ಹೊಂದಿದ್ದು MGNREGA ಉದ್ಯೋಗ ಚೀಟಿ |

| | | |
|---|---|---|
| | | ಹೊಂದಿರಬೇಕು. ರೈತ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು.<br><br>ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ ಇತರೆ ಯಾವುದೇ ಇಲಾಖೆಯು ನೀಡುವ ವಿದ್ಯಾರ್ಥಿ ವೇತನ ಪಡೆಯುತ್ತಿರುವ ವಿದ್ಯಾರ್ಥಿಗಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ. |
| 18 | ಕೃಷಿ ವಿಸ್ತರಣಾ ಉಪ ಅಭಿಯಾನ-SMAE ಆತ್ಮ ಯೋಜನೆ | ಪ್ರಗತಿಪರ ರೈತ ಹಾಗೂ ರೈತ ಮಹಿಳೆಯರಿಗೆ ತರಬೇತಿ ಮತ್ತು ಶೈಕ್ಷಣಿಕ ಪ್ರವಾಸ ಕಾರ್ಯಕ್ರಮಗಳನ್ನು ರಾಜ್ಯ ಹಾಗೂ ಅಂತರ್ ರಾಜ್ಯ ಕ್ಷೇತ್ರಗಳಲ್ಲಿ ಗಣನೀಯ ಸಾಧನೆಗೈದ ನವೀನ ಮಾದರಿಯ ಕ್ಷೇತ್ರ ಪ್ರಾತ್ಯಕ್ಷಿಕೆಗಳು, ಸಂಶೋಧನಾ ಕೇಂದ್ರಗಳು ಹಾಗೂ ಅಭಿವೃದ್ಧಿಪಡಿಸಲಾದ ವಿವಿಧ ತಾಂತ್ರಿಕತೆಗಳನ್ನು ವೀಕ್ಷಿಸಿ, ಆಯ್ದು ತಿಳುವಳಿಕೆಯನ್ನು ಪಡೆದುಕೊಂಡು ತಮ್ಮ ಕ್ಷೇತ್ರದಲ್ಲಿ ಅಳವಡಿಸಿಕೊಳ್ಳುವಲ್ಲಿ ಪ್ರೇರಣೆಗೆ ಪೂರಕವಾದ ಸ್ಥಳಗಳಿಗೆ ಶೈಕ್ಷಣಿಕ ಪ್ರವಾಸವನ್ನು ನಿರ್ವಹಿಸುವುದು ಹಾಗೂ ವಿವಿಧ ತಾಂತ್ರಿಕತೆಗಳ ಕೌಶಲ್ಯತೆಗಳನ್ನು ಜಿಲ್ಲಾ ಮಟ್ಟದ ತರಬೇತಿ ಕೇಂದ್ರಗಳಲ್ಲಿ ಸಮೇತಿ ಮತ್ತು ಕೃಷಿ ವಿಜ್ಞಾನ ಕೇಮದ್ರಗಳ ಸಹಯೋಗದಲ್ಲಿ ನಿರ್ವಹಿಸುವುದು. ರೈತ ಹಾಗೂ ರೈತ ಮಹಿಳೆಯರಿಗಾಗಿ ಜಿಲ್ಲೆಯೊಳಗಿನ, ರಾಜ್ಯದೊಳಗಿನ ಹಾಗೂ ಅಂತರ್ ರಾಜ್ಯ ಎಂಬ ಮೂರು ಪ್ರಕಾರಗಳ ತರಬೇತಿಗಳಡಿ ಮತ್ತು ಶೈಕ್ಷಣಿಕ ಪ್ರವಾಸಗಳನ್ನು ಜಿಲ್ಲಾ ಆತ್ಮ ಸಂಸ್ಥೆಗಳು ನಿರ್ವಹಿಸುತ್ತಿವೆ. ಬಹು ಮುಖ್ಯವಾಗಿ ಕೌಶಲ್ಯವರ್ಧನೆಗಾಗಿ ವಿವಿಧ ರೀತಿಯ ಕೃಷಿ & ಕೃಷಿ ಸಂಬಂಧಿತ ತಾಂತ್ರಿಕತೆಗಳ ಕುರಿತು ಕೌಶಲ್ಯತೆಗಳನ್ನು ಖುದ್ದಾಗಿ ನೋಡಿ, ಅರಿತುಕೊಂಡು ತಾವು ಅಳವಡಿಸಿಕೊಳ್ಳುವಂತೆ ಪ್ರೇರಣೆಗಾಗಿ ಈ ಚಟುವಟಿಕೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತ ವಿಜ್ಞಾನಿ ಸಂವಾದಗಳು, ತಜ್ಞರೊಂದಿಗೆ ಜಂಟಿ ಕ್ಷೇತ್ರ ಭೇಟಿ, ಕಿಸಾನ್ ಗೋಷ್ಠಿಗಳು ಇತ್ಯಾದಿ, ರೈತರೊಂದಿಗೆ ಕ್ಷೇತ್ರಮಟ್ಟದಲ್ಲಿನ ಅಂತರದ ಕೊರತೆ ನೀಗುವಲ್ಲಿ ಸಂವಾದಗಳೊಂದಿಗೆ ಜಂಟಿ ಕ್ಷೇತ್ರ ಭೇಟಿಗಳೊಂದಿಗೆ, ಕಿಸಾನ್ ಗೋಷ್ಠಿ ಚಟುವಟಿಕೆಗಳೊಂದಿಗೆ, ವಿಜ್ಞಾನಿಗಳೊಂದಿಗೆ ನೇರ ಸಂಪರ್ಕದಲ್ಲಿರಿಸುವುದಾಗಿದೆ. |
| 19 | ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (PMFME) | ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು ನೀಡಲಾಗುವುದು. KAPPEC ಸಂಸ್ಥೆಯು ಈ ಯೋಜನೆಯ ಅನುಷ್ಠಾನಕ್ಕೆ ನೋಡಲ್ ಇಲಾಖೆಯಾಗಿರುತ್ತದೆ.<br><br>ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ |

| | | |
|---|---|---|
| | | ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲಾಗುತ್ತಿದೆ. ಯೋಜನೆಯ ಅನುಷ್ಠಾನದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40ರ ಅನುಪಾತದಲ್ಲಿ ಇದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರವು ಶೇ.35ರಷ್ಟು ಹಾಗೂ ರಾಜ್ಯ ಸರ್ಕಾರವು PMFME ಯೋಜನೆಯಡಿಯಲ್ಲಿ ಶೇ.15 ರಷ್ಟು ಹೆಚ್ಚುವರಿ ಸಹಾಯಧನವನ್ನು ನೀಡಲಾಗುತ್ತಿದೆ. ಯೋಜನೆಯ ಪ್ರಯೋಜನ ಪಡೆದುಕೊಳ್ಳಲು ಆಸಕ್ತ ಫಲಾನುಭವಿಗಳು ಕೇಂದ್ರ ಸರ್ಕಾರದ ಆಹಾರ ಸಂಸ್ಕರಣಾ ಉದ್ದಿಮೆಗಳ ಮಂತ್ರಾಲಯದ ಆನ್ ಲೈನ್ ಪೋರ್ಟಲ್ ನಲ್ಲಿ (Online MoFPI Portal) ಅರ್ಜಿಯನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸಬೇಕಾಗಿರುತ್ತದೆ. ಅರ್ಜಿ ಸಲ್ಲಿಕೆಗೆ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳು ಎಲ್ಲಾ ಅವಶ್ಯಕ ಸಹಾಯ ನೀಡಲಿದ್ದಾರೆ. |
| 20 | ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD) RKVY-RAFTAAR: | ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ವಿಶೇಷವಾಗಿ ರಾಜ್ಯದ ಎಲ್ಲಾ ಮಳೆಯಾಶ್ರಿತ ಪ್ರದೇಶದಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.<br>ಈ ಯೋಜನೆಯ ಮುಖ್ಯ ಉದ್ದೇಶವು ರೈತರ ಜಮೀನಿನಲ್ಲಿ ವಿವಿಧ ಮಾದರಿಯ ಸಮಗ್ರ ಕೃಷಿ ಪದ್ಧತಿಗಳನ್ನು ಹಾಗೂ ಮೌಲ್ಯವರ್ಧಿತ ಚಟುವಟಿಕೆಗಳನ್ನು ಅಳವಡಿಸಿಕೊಳ್ಳುವಂತೆ ಉತ್ತೇಜಿಸುವುದು; ರೈತರಿಗೆ ಸಮಗ್ರ ಕೃಷಿ ಪದ್ಧತಿಗಳಾದ ಸಮಗ್ರ ಕೃಷಿ ಪದ್ಧತಿಯಡಿ ಬೆಳೆಗಳು (ರಾಗಿ ಬೆಳೆಗಳು/ ಎಣ್ಣೆಬೀಜಗಳು/ದ್ವಿದಳಧಾನ್ಯಗಳು/ತರಕಾರಿಗಳು/ಮೇವು) +ಮರಗಳು (ತೋಟಗಾರಿಕೆ/ ಕೃಷಿ ಅರಣ್ಯ)+ ಜಾನುವಾರುಗಳು ಹಾಲು ಹಸುಗಳು / ಎಮ್ಮೆಗಳು / ಸಣ್ಣ ಮೆಲುಕು ಹಾಕುವ ಪ್ರಾಣಿಗಳು (10 ಪ್ರಾಣಿಗಳು (ಕುರಿ ಅಥವಾ ಮೇಕೆ ಅಥವಾ ಹಂದಿಗಳು) / 50 ಪಕ್ಷಿಗಳು (ಬಾತುಕೋಳಿ) ಅಳವಡಿಸಲು ಉತ್ತೇಜಿಸುವುದು. ಮೌಲ್ಯವರ್ಧನೆ ಚಟುವಟಿಕೆಗಳಾದ ಮೀನುಗಾರಿಕೆ, ಜೇನುಕೃಷಿ, ಸೈಲೇಜ್ ತಯಾರಿಕ ಘಟಕ ಮತ್ತು ಎರೆಹುಳುಗೊಬ್ಬರ ಘಟಕಗಳನ್ನು ಇತರೆ ಯೋಜನೆಗಳೊಂದಿಗೆ ಒಗ್ಗೂಡಿಸುವುದು.<br><br>**ಈ ಯೋಜನೆಯಡಿ ರೈತರು ಸವಲತ್ತುಗಳನ್ನು ಪಡೆಯಲು ಇರುವ ಮಾನದಂಡ ಈ ಕೆಳಕಂಡಂತಿದೆ.**<br>1. ಗುಚ್ಛ ಗ್ರಾಮ (Cluster village) ಆಧಾರದ ಮೇಲೆ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗುತ್ತಿದೆ. ಫಲಾನುಭವಿ ರೈತರು ಗುಚ್ಛಗ್ರಾಮದವರಾಗಿರಬೇಕು<br>2. ಒಂದು ಗುಚ್ಛವು ಕನಿಷ್ಠ 20 ಹೆಕ್ಟೇರ್ ಅಥವಾ ಹೆಚ್ಚಿನ ಕ್ಷೇತ್ರವನ್ನು ಒಂದು ಗುಚ್ಛವೆಂದು (Cluster) ಪರಿಗಣಿಸಲಾಗುತ್ತದೆ.<br>**3. ಸದರಿ ಯೋಜನೆಯಡಿ ಪರಿಷ್ಕೃತ ಮಾರ್ಗಸೂಚಿಯನ್ವಯ ಪ್ರತಿ ಕೃಷಿ ಕುಟುಂಬಕ್ಕೆ ರೂ. 30,000/- ಆರ್ಥಿಕ** |

<table>
<tr><td></td><td></td><td>ಸಹಾಯವನ್ನು ನೀಡಲಾಗುವುದು.<br>4. ರಾಜ್ಯದ ಎಲ್ಲಾ ವರ್ಗದ ರೈತರು ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಬಹುದಾಗಿದೆ</td></tr>
<tr><td>21</td><td>ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ -ಇತರೆ ಉಪಚಾರಗಳು (PMKSY -OI):</td><td>ಈ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಶೇ.60:40 ರ ಅನುಪಾತದ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನದ ಮೂಲಕ ರಾಜ್ಯದಲ್ಲಿ ಅನುಷ್ಠಾನ<br>1. ಕೃಷಿ/ತೋಟಗಾರಿಕೆ/ರೇಷ್ಮೆ ಇಲಾಖೆ ಮೂಲಕ ಸೂಕ್ಷ್ಮ ನೀರಾವರಿ ಘಟಕಗಳನ್ನು ಅಳವಡಿಸಿಕೊಂಡಿರುವ ರೈತರು ಈ ಯೋಜನೆಯ ಫಲಾನುಭವಿಗಳು<br>2. ಈ ಯೋಜನೆಯಡಿ ಸೂಕ್ಷ್ಮ ನೀರಾವರಿ ಘಟಕಗಳನ್ನು ಅಳವಡಿಸಿಕೊಂಡಿರುವ ಆಸಕ್ತ ರೈತರಿಗೆ ಈ ಕೆಳಕಂಡ ಚಟುವಟಿಕೆಗಳನ್ನು ಸಬ್ಸಿಡಿ/ರಿಯಾಯಿತಿ ದರದಲ್ಲಿ ರೂ. 75,000/- ಗಳ ಮಿತಿಗೆ ಒಳಪಟ್ಟು ಅನುಷ್ಠಾನ ಮಾಡಲಾಗುತ್ತಿದೆ.
<table>
<tr><th>ಕ್ರ. ಸಂ</th><th>ಚಟುವಟಿಕೆ</th><th>ಸಬ್ಸಿಡಿ/ರಿಯಾಯಿತಿ</th></tr>
<tr><td>1</td><td>ವೈಯಕ್ತಿಕ ನೀರು ಸಂಗ್ರಹಣಾ ವಿನ್ಯಾಸಗಳು (ಕೃಷಿ ಹೊಂಡ)</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.75,000/-</td></tr>
<tr><td>2</td><td>ಅಂತರ್ಜಲ ಸುರಕ್ಷಿತ ತಾಲ್ಲೂಕುಗಳಲ್ಲಿ ಬೋರ್ ವೆಲ್ ಅಥವಾ ಟ್ಯೂಬ್ ವೆಲ್ (ಅಲ್ಪಾ/ಮಧ್ಯಮ ಆಳ)</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.25,000/-</td></tr>
<tr><td>3</td><td>ಸಣ್ಣ ಬಾವಿಗಳ ಮರುಸ್ಥಾಪನೆ ಅಥವಾ ನವೀಕರಣ</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.15,000/-</td></tr>
<tr><td>4</td><td>ಸ್ಥಗಿತಗೊಂಡಿರುವ ಕೊಳವೆ ಬಾವಿಗಳ ಮರುಪೂರಣ</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.5,000/-</td></tr>
<tr><td>5</td><td>ಪೈಪು/ಪ್ರಿ-ಕಾಸ್ಟ್ ವಿತರಣಾ ವ್ಯವಸ್ಥೆ</td><td>ಪ್ರತಿ ಹೆಕ್ಟೇರ್‌ಗೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.10,000/-</td></tr>
<tr><td>6</td><td>ನೀರೆತ್ತುವ ಸಾಧನಗಳು (ವಿದ್ಯುತ್, ಡೀಸೆಲ್, ಪವನ ಮತ್ತು ಸೌರ)</td><td>ಅ)ಪ್ರತಿ ವಿದ್ಯುತ್/ಡೀಸೆಲ್ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.15,000/-<br>ಆ)ಪ್ರತಿ ಪವನ/ಸೌರ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.50,000/-</td></tr>
<tr><td>7</td><td>ಪೆಟ್ರೋಲ್ ನೀರಾವರಿ ಪಂಪ್ ಸೆಟ್-15hp ವರೆಗೆ</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.10,000/-</td></tr>
</table></td></tr>
</table>

**ಅನುಬಂಧ- 2**

## ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು

### ಬೋಧಕ ಹುದ್ದೆಗಳ ವಿವರ

| ಕ್ರ.ಸಂ. | ವೃಂದ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ ಹುದ್ದೆಗಳು | ಭರ್ತಿ ಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳ ಸಂಖ್ಯೆ |
| ಗ್ರೂಪ್ 'ಎ' ಹುದ್ದೆಗಳು | | | | |
| 1 | ಪ್ರಾಧ್ಯಾಪಕರು | 56 | 27 | 29 |
| 2 | ಸಹ ಪ್ರಾಧ್ಯಾಪಕರು | 144 | 88 | 56 |
| 3 | ಸಹಾಯಕ ಪ್ರಾಧ್ಯಾಪಕರು | 396 | 224 | 172 |
| | **ಒಟ್ಟು** | **596** | **339** | **257** |

### ಬೋಧಕೇತರ ಹುದ್ದೆಗಳ ವಿವರ

| ಕ್ರ.ಸಂ. | ಹುದ್ದೆಗಳ ವರ್ಗ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳ ಸಂಖ್ಯೆ |
| 1. | ಗ್ರೂಪ್ 'ಎ' ಹುದ್ದೆಗಳು | 56 | 41 | 15 |
| 2. | ಗ್ರೂಪ್ 'ಬಿ' ಹುದ್ದೆಗಳು | 49 | 25 | 24 |
| 3. | ಗ್ರೂಪ್ 'ಸಿ' ಹುದ್ದೆಗಳು | 1053 | 361 | 692 |
| 4. | ಗ್ರೂಪ್ 'ಡಿ' ಹುದ್ದೆಗಳು | 406 | 77 | 329 |
| | **ಒಟ್ಟು** | **1564** | **504** | **1060** |

# ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಧಾರವಾಡ

## ಬೋಧಕ ಹುದ್ದೆಗಳ ವಿವರ

| ಕ್ರ.ಸಂ. | ವೃಂದ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ ಹುದ್ದೆಗಳು | ಭರ್ತಿ ಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳ ಸಂಖ್ಯೆ |
| ಗ್ರೂಪ್ 'ಎ' ಹುದ್ದೆಗಳು | | | | |
| 1 | ಪ್ರಾಧ್ಯಾಪಕರು | 57 | 5 | 52 |
| 2 | ಸಹ ಪ್ರಾಧ್ಯಾಪಕರು | 90 | 22 | 68 |
| 3 | ಸಹಾಯಕ ಪ್ರಾಧ್ಯಾಪಕರು | 448 | 281 | 167 |
| | **ಒಟ್ಟು** | **595** | **308** | **287** |

## ಬೋಧಕೇತರ ಹುದ್ದೆಗಳ ವಿವರ

| ಕ್ರ.ಸಂ. | ಹುದ್ದೆಗಳ ವರ್ಗ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳ ಸಂಖ್ಯೆ |
| 1 | ಗ್ರೂಪ್ 'ಎ' ಹುದ್ದೆಗಳು | 44 | 31 | 13 |
| 2 | ಗ್ರೂಪ್ 'ಬಿ' ಹುದ್ದೆಗಳು | 60 | 4 | 56 |
| 3 | ಗ್ರೂಪ್ 'ಸಿ' ಹುದ್ದೆಗಳು & ಗ್ರೂಪ್ 'ಡಿ' ಹುದ್ದೆಗಳು | 403 | 54 | 349 |
| | **ಒಟ್ಟು** | **1074** | **411** | **663** |

## ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ

### ಬೋಧಕ ಹುದ್ದೆಗಳ ವಿವರ

| ಕ್ರ.ಸಂ. | ವೃಂದ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ ಹುದ್ದೆಗಳು | ಭರ್ತಿ ಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳ ಸಂಖ್ಯೆ |
| ಗ್ರೂಪ್ 'ಎ' ಹುದ್ದೆಗಳು | | | | |
| 1 | ಪ್ರಾಧ್ಯಾಪಕರು | 29 | 01 | 28 |
| 2 | ಸಹ ಪ್ರಾಧ್ಯಾಪಕರು | 62 | 05 | 57 |
| 3 | ಸಹಾಯಕ ಪ್ರಾಧ್ಯಾಪಕರು | 238 | 225 | 13 |
| | ಒಟ್ಟು | **329** | **231** | **98** |

### ಬೋಧಕೇತರ ಹುದ್ದೆಗಳ ವಿವರ

| ಕ್ರ.ಸಂ. | ಹುದ್ದೆಗಳ ವರ್ಗ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳ ಸಂಖ್ಯೆ |
| 1. | ಗ್ರೂಪ್ 'ಎ' ಹುದ್ದೆಗಳು | 22 | 15 | 07 |
| 2. | ಗ್ರೂಪ್ 'ಬಿ' ಹುದ್ದೆಗಳು | 20 | 8 | 12 |
| 3. | ಗ್ರೂಪ್ 'ಸಿ' ಹುದ್ದೆಗಳು | 366 | 82 | 284 |
| 4. | ಗ್ರೂಪ್ 'ಡಿ' ಹುದ್ದೆಗಳು | 142 | 24 | 118 |
| | **ಒಟ್ಟು** | **550** | **129** | **421** |

***

## ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು

### ಬೋಧಕ ಹುದ್ದೆಗಳ ವಿವರ

| ಕ್ರ.ಸಂ. | ವೃಂದ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳ ಸಂಖ್ಯೆ |
| **ಗ್ರೂಪ್ 'ಎ' ಹುದ್ದೆಗಳು** | | | | |
| 1 | ಪ್ರಾಧ್ಯಾಪಕರು | 49 | 0 | 49 |
| 2 | ಸಹ ಪ್ರಾಧ್ಯಾಪಕರು | 78 | 2 | 76 |
| 3 | ಸಹಾಯಕ ಪ್ರಾಧ್ಯಾಪಕರು | 390 | 249 | 141 |
| | ಒಟ್ಟು | **517** | **251** | **266** |

### ಬೋಧಕೇತರ ಹುದ್ದೆಗಳ ವಿವರ

| ಕ್ರ.ಸಂ. | ಹುದ್ದೆಗಳ ವರ್ಗ | ಹುದ್ದೆಗಳ ಸಂಖ್ಯೆ | | |
|---|---|---|---|---|
| | | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳ ಸಂಖ್ಯೆ |
| 1 | ಗ್ರೂಪ್ 'ಎ' ಹುದ್ದೆಗಳು | 41 | 22 | 19 |
| 2 | ಗ್ರೂಪ್ 'ಬಿ' ಹುದ್ದೆಗಳು | 48 | 18 | 30 |
| 3 | ಗ್ರೂಪ್ 'ಸಿ' ಹುದ್ದೆಗಳು | 681 | 346 | 335 |
| 4 | ಗ್ರೂಪ್ 'ಡಿ' ಹುದ್ದೆಗಳು | 247 | 67 | 180 |
| | **ಒಟ್ಟು** | **1017** | **453** | **564** |

| GROUP D | | | |
|---|---|---|---|
| Sl. No | GRP | NAME OF THE POST | FILL |
| 47. | D | MESSENGER | 14 |
| 48. | D | HELPER WIREMAN / HELPER BUS / GUESTHOUSE HELPER /SPORTS HELPER (2+4+1+2) | 1 |
| 49. | D | WATCHMAN | 4 |
| 50. | D | JANITOR | 3 |
| 51. | D | BULLOCKMAN / MILK MAN / FIELD MAN | 4 |
| 52. | D | MALI | 1 |
| 53. | D | FARM LABOUR | 40 |
| | | **TOTAL GROUP D** | **67** |
| | | **GRAND TOTAL (GROUP A+B+C+D)** | **704** |

**4) ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಇರುವಕ್ಕಿ, ಶಿವಮೊಗ್ಗ**

**ಬೋಧಕ**

| ಕ್ರ.ಸಂ. | ವಿಷಯ ತಜ್ಞರು | ಸಂಖ್ಯೆ |
|---|---|---|
| 1. | ಅನುವಂಶೀಯತೆ ಮತ್ತು ಸಸ್ಯ ತಳಿ ಅಭಿವೃದ್ಧಿ | 17 |
| 2. | ಅರಣ್ಯ ಉತ್ಪನ್ನ ಬಳಕೆ | 1 |
| 3. | ಅರಣ್ಯ | 1 |
| 4. | ಅರಣ್ಯ ಕೃಷಿ | 3 |
| 5. | ಅರಣ್ಯ ನೆಡುತೋಪು | 1 |
| 6. | ಅರಣ್ಯ ನಿರ್ವಹಣೆ | 1 |
| 7. | ಆಹಾರ ವಿಜ್ಞಾನ ಮತ್ತು ಪೌಷ್ಠಿಕಾಂಶ | 7 |
| 8. | ಕೃಷಿ ಅರ್ಥಶಾಸ್ತ್ರ | 5 |
| 9. | ಕೃಷಿ ಇಂಜಿನಿಯರಿಂಗ್ | 14 |
| 10. | ಕೃಷಿ ಕೀಟಶಾಸ್ತ್ರ | 23 |
| 11. | ಕೃಷಿ ವಿಸ್ತರಣೆ | 18 |
| 12. | ಕೃಷಿ ಸಂಖ್ಯಾಶಾಸ್ತ್ರ | 5 |
| 13. | ಕೃಷಿ ಸೂಕ್ಷ್ಮಜೀವಶಾಸ್ತ್ರ | 4 |
| 14. | ಗಣಕ ವಿಜ್ಞಾನ | 3 |
| 15. | ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ | 3 |
| 16. | ಜೀವ ರಸಾಯನಶಾಸ್ತ್ರ | 1 |
| 17. | ಜೈವಿಕ ತಂತ್ರಜ್ಞಾನ | 4 |
| 18. | ತರಕಾರಿಬೆಳೆಶಾಸ್ತ್ರ | 2 |
| 19. | ತೋಟಗಾರಿಕೆ | 22 |
| 20. | ದೈಹಿಕ ಶಿಕ್ಷಣ | 4 |
| 21. | ನೆಡುತೋಪು, ಸಾಂಬಾರು, ಔಷಧಿ ಮತ್ತು ಸುಗಂಧದ್ರವ್ಯ ಬೆಳೆಗಳು | 3 |
| 22. | ಪಶು ವಿಜ್ಞಾನ | 2 |
| 23. | ಪುಷ್ಪಕೃಷಿ ಮತ್ತು ಉದ್ಯಾನವಿನ್ಯಾಸ | 2 |
| 24. | ಬೀಜ ವಿಜ್ಞಾನ ಮತ್ತು ತಂತ್ರಜ್ಞಾನ | 4 |
| 25. | ಬೆಳೆ ಜೈವಿಕ ತಂತ್ರಜ್ಞಾನ | 1 |

| ಕ್ರ.ಸಂ. | ವಿಷಯ ತಜ್ಞರು | ಸಂಖ್ಯೆ |
|---|---|---|
| 26. | ಬೆಳೆ ಶರೀರ ಶಾಸ್ತ್ರ | 3 |
| 27. | ಬೇಸಾಯ ಶಾಸ್ತ್ರ | 29 |
| 28. | ಮಣ್ಣು ವಿಜ್ಞಾನ ಮತ್ತು ಕೃಷಿ ರಸಾಯನಶಾಸ್ತ್ರ | 17 |
| 29. | ಮೀನುಗಾರಿಕೆ / ಒಳನಾಡಿನ ಮೀನುಗಾರಿಕೆ | 6 |
| 30. | ಸಸ್ಯ ರೋಗಶಾಸ್ತ್ರ | 10 |
| 31. | ಹಣ್ಣುಬೆಳೆಶಾಸ್ತ್ರ | 2 |
| 32. | ಇಂಗ್ಲೀಷ್ | 2 |
| 33. | ಕನ್ನಡ | 1 |
| 34. | ಕಾಡು ಜೀವನ ಮತ್ತು ಅರಣ್ಯ ಜೀವಶಾಸ್ತ್ರ | 1 |
| 35. | ಕೃಷಿ ಅರಣ್ಯ | 3 |
| 36. | ಕ್ಷೇತ್ರ ಅಧೀಕ್ಷಕರು | 5 |
| 37. | ಗೃಹ ವಿಜ್ಞಾನ | 2 |
| | ಒಟ್ಟು | **232** |

**ಭೋಧಕೇತರ**

| ಕ್ರ. ಸಂ. | ವಿಷಯ ತಜ್ಞರು | ಸಂಖ್ಯೆ |
|---|---|---|
| 1. | ಉಪ ಹಣಕಾಸು ನಿಯಂತ್ರಣಾಧಿಕಾರಿ | 1 |
| 2. | ಸಹಾಯಕ ಆಡಳಿತಾಧಿಕಾರಿಗಳು | 4 |
| 3. | ಸಹಾಯಕ ಕುಲಸಚಿವರು | 2 |
| 4. | ಸಹಾಯಕ ಹಣಕಾಸು ನಿಯಂತ್ರಣಾಧಿಕಾರಿಗಳು | 5 |
| 5. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಸಿವಿಲ್) | 2 |
| 6. | ಅಧೀಕ್ಷಕರು (ಸಾಮಾನ್ಯ) | 4 |
| 7. | ಅಧೀಕ್ಷಕರು (ಲೆಕ್ಕ) | 4 |
| 8. | ಆಪ್ತ ಕಾರ್ಯದರ್ಶಿಗಳು | 1 |
| 9. | ಫಾರ್ಮ್ ಮ್ಯಾನೇಜರ್ / ತಾಂತ್ರಿಕ ಸಹಾಯಕರು / ಕಾರ್ಯಕ್ರಮ ಸಹಾಯಕರು | 12 |
| 10. | ಹಿರಿಯ ಸಹಾಯಕ (ಸಾಮಾನ್ಯ) | 5 |
| 11. | ಹಿರಿಯ ಸಹಾಯಕ (ಲೆಕ್ಕ) | 3 |
| 12. | ಹಿರಿಯ ಕ್ಷೇತ್ರ ಸಹಾಯಕರು | 8 |
| 13. | ಹಿರಿಯ ಪ್ರಯೋಗ ಶಾಲಾ ಸಹಾಯಕರು | 10 |
| 14. | ಸಹಾಯಕರು | 5 |
| 15. | ಪ್ರಯೋಗಶಾಲಾ ಸಹಾಯಕರು | 12 |
| 16. | ಎಲೆಕ್ಟ್ರಿಕಲ್ ವೈರ್ ಮ್ಯಾನ್ | 1 |
| 17. | ಟ್ರಾಕ್ಟರ್ ಡ್ರೈವರ್ | 4 |
| 18. | ಭಾರೀ ವಾಹನ ಚಾಲಕರು | 12 |
| 19. | ಅಟೆಂಡರ್ | 15 |
| 20. | ಕಿರಿಯ ತಾಂತ್ರಿಕರು | 3 |
| 21. | ಕುಕ್ ಕಂ ಕೇರ್ ಟೇಕರ್ | 2 |
| 22. | ಸಹಾಯಕ ಕುಕ್ ಕಂ. ಕೇರ್ ಟೇಕರ್ | 2 |
| 23. | ಮೆಸೆಂಜರ್ | 5 |
| 24. | ಗೆಸ್ಟ್ ಹೌಸ್ ಕ್ಲೀನರ್ | 1 |
| 25. | ಫಾರಂ ಲೇಬರರ್ (ರೆಗ್ಯುಲರ್) | 14 |
| | ಒಟ್ಟು | **137** |

*****